<u>ಕರ್ನಾಟಕ ವಿಧಾನಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1060 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.<br>(ವಿಧಾನಸಭೆಯಿಂದ ಚುನಾಯಿರಾದವರು) |
| ಉತ್ತರಿಸಬೇಕಾದ ದಿನಾಂಕ | : | 18-12-2024 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು. |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲ್ಲೂಕಿನ ಕೊಯ್ಲಾದಲ್ಲಿನ ಪಶುಸಂಗೋಪನಾ ಕಾಲೇಜಿನಲ್ಲಿ ಶೈಕ್ಷಣಿಕ ಚಟುವಟಿಕೆಗಳು ಈಗಾಗಲೇ ಪ್ರಾರಂಭಗೊಂಡಿವೆಯೇ;</td><td>ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರಿನ ಅಡಿಯಲ್ಲಿ ಬರುವ ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲ್ಲೂಕಿನ ಕೊಯ್ಲಾದಲ್ಲಿ ಪಶುವೈದ್ಯಕೀಯ ಮಹಾವಿದ್ಯಾಲಯವನ್ನು ಸ್ಥಾಪಿಸಲು ಸರ್ಕಾರದ ಆದೇಶ ಸಂಖ್ಯೆ ಪಸಂಮೀ 115 ಪಅಸೇ 2012, ದಿನಾಂಕ: 07-08-2012 ರಂತೆ ಆಡಳಿತಾತ್ಮಕ ಮಂಜೂರಾತಿ ನೀಡಿದೆ. ಸದರಿ ಕಾಲೇಜಿನಲ್ಲಿ ಶೈಕ್ಷಣಿಕ ಚಟುವಟಿಕೆಗಳು ಇನ್ನೂ ಪ್ರಾರಂಭಗೊಂಡಿರುವುದಿಲ್ಲ.</td></tr>
<tr><td>ಆ)</td><td>ಪ್ರಾರಂಭಗೊಂಡಿದ್ದಲ್ಲಿ, ಸದರಿ ಕಾಲೇಜಿಗೆ ಬೇಕಾಗಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಪೂರ್ಣ ಮಟ್ಟದಲ್ಲಿ ಈಗಾಗಲೇ ಒದಗಿಸಲಾಗಿದೆಯೇ; (ವಿವರ ನೀಡುವುದು)</td><td rowspan="2">ಭಾರತೀಯ ಪಶುವೈದ್ಯಕೀಯ ಪರಿಷತ್ತಿನ ನಿಯಮಾವಳಿ 2016 ರ ಪ್ರಕಾರ ಪಶುವೈದ್ಯಕೀಯ ಮಹಾವಿದ್ಯಾಲಯ ಪ್ರಾರಂಭಿಸಬೇಕಾದರೆ ಅಗತ್ಯವಿರುವ ಕಟ್ಟಡ, ಮೂಲಭೂತ ಸೌಕರ್ಯ ಮತ್ತು ಸಿಬ್ಬಂದಿಗಳ ಅವಶ್ಯಕತೆಯಿರುತ್ತದೆ. ಈ ನಿಟ್ಟಿಯಲ್ಲಿ ಮೊದಲನೇ ಹಂತದಲ್ಲಿ ಪಶುವೈದ್ಯಕೀಯ ಮಹಾವಿದ್ಯಾಲಯದ ಕಟ್ಟಡ, ಆಸ್ಪತ್ರೆ, ಅತಿಥಿ ಗೃಹ, ವಿದ್ಯಾರ್ಥಿನಿಯರ ವಸತಿ ನಿಲಯ ಮತ್ತು ವಿದ್ಯಾರ್ಥಿನಿಯರ ವಸತಿ ನಿಲಯದ ಕಾಮಗಾರಿ ಪೂರ್ಣಗೊಂಡಿದ್ದು, ಕರ್ನಾಟಕ ಗೃಹ ಮಂಡಳಿ ಬೆಂಗಳೂರು ವತಿಯಿಂದ ಜೂನ್-2023 ರಲ್ಲಿ ವಿಶ್ವವಿದ್ಯಾಲಯಕ್ಕೆ ಹಸ್ತಾಂತರ ಮಾಡಲಾಗಿದೆ. ಇನ್ನೂ ಅವಶ್ಯಕವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕಾರ್ಯ ಪ್ರಗತಿಯಲ್ಲಿವೆ.<br><br>ಮೊದಲನೇ ಮತ್ತು ಎರಡನೇ ವರ್ಷದ ಶೈಕ್ಷಣಿಕ ಚಟುವಟಿಕೆಗಳಿಗೆ ಅವಶ್ಯಕವಿರುವ ಕಾಮಗಾರಿಗಳ ಪೈಕಿ ಈ ಕೆಳಗಿನ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲಾಗಿದೆ.<br><br><table><tr><th>ಕ್ರ ಸಂ</th><th>ವಿವರ</th><th>ಮೊಬಲಗು (ರೂ.ಗಳಲ್ಲಿ)</th></tr><tr><td>1.</td><td>Construction of inpatient ward and cattery</td><td>7871495.00</td></tr><tr><td>2</td><td>Construction of isolation ward</td><td>3725418.00</td></tr></table></td></tr>
<tr><td>ಇ)</td><td>ಇದುವರೆಗೂ ಒದಗಿಸದಿದ್ದಲ್ಲಿ, ಒದಗಿಸಲು ಬಾಕಿ ಉಳಿದಿರುವ ಮೂಲಭೂತ ಸೌಕರ್ಯಗಳಾವುವು; ಇದಕ್ಕೆ ಬೇಕಾಗಿರುವ ಅನುದಾನವೆಷ್ಟು; (ವಿವರ ನೀಡುವುದು)</td></tr>
</table>

| | | |
|---|---|---|
| 3 | Construction of postmortem hall/block | 11177464.00 |
| 4 | Construction of slaughter house | 11007557.00 |
| 5 | Construction of small animal house phase-1 | 9593252.00 |
| 6 | Providing electrification infrastructure connected cabling at Veterinary College, Putturr | 20560436.00 |
| 7 | Providing civil works connected to cabling at Veterinary College, Koila, Puttur | 15350000.00 |

ಬಾಕಿ ಉಳಿದಿರುವ ಮತ್ತು ಎರಡನೇ ಹಂತದ ಕಾಲೇಜಿನ ಕಾಮಗಾರಿ/ ಸಲಕರಣೆಗಳು/ ಪೀಠೋಪಕರಣಗಳು/ ಗ್ರಂಥಾಲಯ ಇತ್ಯಾದಿಗಳಿಗೆ ರೂ.163.75 (ರೂಪಾಯಿ ಒಂದುನೂರ ಅರವತ್ತೂರು ಕೋಟಿ ಎಪ್ಪತ್ತೈದು ಲಕ್ಷಗಳು ಮಾತ್ರ) ಆಡಳಿತಾತ್ಮಕ ಅನುಮತಿ ನೀಡಲಾಗಿದೆ.

ಮುಂದುವರೆದು, ಮೊದಲನೇ ಮತ್ತು 2ನೇ ವರ್ಷದ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಲು ಅವಶ್ಯಕವಾಗಿ ಬೇಕಾಗಿರುವ ಈ ಕೆಳಕಂಡ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡುವ ಸಂಬಂಧ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.

| ಕ್ರ ಸಂ | ವಿವರ | ಮೊಬಲಗು (ರೂ.ಗಳಲ್ಲಿ) |
|---|---|---|
| 1. | Ground level service reservoir (4 lakh litres capacity) | 52,58,211/- |
| 2 | External lighting/cabling/transformer/ building cables/DG/Solar/High mask/Lt Panels/Feeder pillars | 5,95,23,593/- |
| 3 | Laboratory equipments | 4,50,00,000/- |
| 4 | Furnitures | 3,00,00,000/- |
| 5 | Vehicles (Bus, Tractor & Car) | 1,00,00,000/- |
| 6 | Formation of Roads & Drains | 2,50,00,000/- |
| | **Total (A)** | **17,47,81,804/-** |
| 7 | Tender premium @ 5% on total ' | 87,39,090/- |
| 8 | Price Variation @ 5% on total | 87,39,090/- |
| 9 | GST @ 18% (A+B+C) | 3,14,60,725/- |
| 10 | Architect Fees | 62,79,291/- |
| | **GRAND TOTAL** | **23,00,00,000/-** |

| | | |
|---|---|---|
| | | ಮುಂದುವರೆದು, Minimum Standard for Veterinary Education-2016 ರ ಪ್ರಕಾರ ಅವಶ್ಯಕವಿರುವ ಜಾನುವಾರು ಸಾಕಾಣಿಕಾ ಘಟಕಗಳನ್ನು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಅಡಿಯಲ್ಲಿ ಇರುವ ಫಾರಂಗಳನ್ನು ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸುವಂತೆ ವಿಶ್ವವಿದ್ಯಾಲಯವು ಕೋರಿರುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.<br><br>ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಲು ಅವಶ್ಯಕವಿರುವ 25 ಬೋಧಕ ಸಿಬ್ಬಂದಿಗಳನ್ನು ನೇಮಿಸಲು ಅನುಮೋದನೆ ನೀಡಲಾಗಿದೆ.<br><br>ಬೋಧಕೇತರ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲು 24 ವಿವಿಧ ಹುದ್ದೆಗಳಿಗೆ ಹೊರಗುತ್ತಿಗೆ ಮುಖಾಂತರ ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದ್ದು, ಪ್ರಕ್ರಿಯೆ ಜಾರಿಯಲ್ಲಿದೆ. |
| ಈ) | ಯಾವ ಕಾಲಮಿತಿಯೊಳಗೆ ಬಾಕಿ ಉಳಿದಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು? | ಮೂಲಭೂತ ಸೌಕರ್ಯಗಳು ಪೂರ್ಣಗೊಂಡ ನಂತರ ಹಾಗೂ ಅವಶ್ಯಕವಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಭರ್ತಿ ನಂತರ ಸದರಿ ಮಹಾವಿದ್ಯಾಲಯಕ್ಕೆ ಪರೀವೀಕ್ಷಣೆಗೆ ಭಾರತೀಯ ಪಶುವೈದ್ಯಕೀಯ ಪರಿಷತ್ತು ನವದೆಹಲಿ ಇವರಿಗೆ ಪತ್ರ ಬರೆಯಲಾಗುವುದು. ಸದರಿ ಪಶುವೈದ್ಯಕೀಯ ಪರಿಷತ್ತಿನ ತಂಡವು ಮಹಾವಿದ್ಯಾಲಯಕ್ಕೆ ಭೇಟಿ ನೀಡಿ ಅನುಮತಿ ನೀಡಿದ ನಂತರ ಮಹಾವಿದ್ಯಾಲಯಕ್ಕೆ ಪ್ರವೇಶಾವಕಾಶ ಕಲ್ಪಿಸಲಾಗುವುದು. |

ಸಂಖ್ಯೆ: ಪಸಂಮೀ ಇ-381 ಪಅಸೇ 2024

**(ಕೆ.ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು